ಪ್ರಸ್ತಾವದ ಪರವಾಗಿರುವವರು "ಹೌದು"ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಹಾಗೂ ಪಶುಸಂಗೋಪನಾ ಸಚಿವರು): ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ(ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ –2

2) ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ 2014

ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು): ಮಾನ್ಯ ಅಧ್ಯಕ್ಷರೆ 2014ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೊರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2014 ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು"ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು,

ಪ್ರಸ್ತಾವನೆ ಅಂಗೀಕರಿಸಲಾಯಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ವಿನಯ್ ಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು): ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ(ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ,

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–3)

II ವಿಧೇಯಕಗಳನ್ನು ಪರ್ಯಾಲೋಚನೆ ಹಾಗೂ ಅಂಗೀಕಾರ

ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ವಿಧೇಯಕ, 2014,

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಆರ್.ವಿ.ದೇಶಪಾಂಡೆ(ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು): ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ,ನಿವೃತ್ತಿ ವೇತನ ಮತ್ತು ಇತರಸೌಲಭ್ಯಗಳ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ. ಪ್ರಸ್ತಾವ ಮಂಡಿಸಲಾಯಿತು

ಅಧ್ಯಕ್ಷರು: ವಿಧೇಯಕದ ಕುರಿತು ವಿವರಣೆ ನೀಡಿ,

ಶ್ರೀ ಆರ್.ವಿ.ದೇಶಪಾಂಡೆ(ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು): ಮಾನ್ಯ, ಅಧ್ಯಕ್ಷರೆ, ಹಲವಾರು ಖಾಸಗಿ ಸಂಸ್ಥೆಗಳಿಗೆ ಸರ್ಕಾರ Grant - in - aid ಕೊಡುತ್ತಾ ಬಂದಿದೆ. ಈ Grant - in - aid ಮುಂಚೆ ಕೊಡುವಾಗ ಮುಖ್ಯವಾಗಿ managementಗೆ maintenance ಗೆಂದು ಹೋಗುತ್ತಿತು. ಅದರ ನಂತರ 1977ನೇ ಇಸವಿಯಲ್ಲಿ ತಮಗೆ ಸರಿಯಾದ ಸಮಯಕ್ಕೆ ಸಂಬಳ ಸಿಗುವುದಿಲ್ಲ, ಎಲ್ಲಾ ಸಂಬಳ ನಮ್ಮ ಕೈಗೆ ಬರುತ್ತಿಲ್ಲ. ಹಲವಾರು ಶಿಕ್ಷಕರು ಸರ್ಕಾರದ ಗಮನಕ್ಕೆ ತಂದರು. ಹಾಗಾಗಿ ನೇರವಾಗಿ ಕೊಡುವ ಪ್ರಕ್ರಿಯೆ ಶುರುವಾಯಿತು. ನಿಮ್ಮ ಸರ್ಕಾರ ಇದ್ದಾಗ, ಇದರ ಹಿಂದಿನ ಸರ್ಕಾರಗಳು ಇದ್ದಾಗ, ಈಗ ನಮ್ಮ ಸರ್ಕಾರದಲ್ಲೂ ಇದು ಮುಂದು